## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2023-24ನೇ ಸಾಲಿನಲ್ಲಿ ಸ್ವಾವಲಂಬಿ ಸಾರಥಿ ಯೋಜನೆಯಡಿ ಹೊಡಿಸಿರುವ ಸರ್ಕಾರಿ ಆದೇಶವನ್ನು ಮಾರ್ಪಡಿಸಿ ತಿದ್ದುಪಡಿ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:-** 1. ಸರ್ಕಾರದ ಆದೇಶ ಸಂಖ್ಯೆ:ಸಕಇ 254 ಎಸ್‌ಡಿಸಿ 2023, ದಿನಾಂಕ:14.09.2023.

2. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪತ್ರ ಸಂಖ್ಯೆ:ಡಾ:ಬಿ.ಆರ್ ಅಂಅನಿ /ಕೈ-ತ/ ನಿಮಂಸಭೆ- 238/ 2024-25/ 3800, ದಿನಾಂಕ:23.09.2024.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರ ಸರ್ಕಾರದ ಆದೇಶದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ನಿರುದ್ಯೋಗಿ ಯುವಜನರು ಸ್ವಯಂ ಉದ್ಯೋಗ ಕೈಗೊಳ್ಳಲು 4 ಚಕ್ರಗಳ ವಾಹನ ಖರೀದಿಗೆ ಪಡೆಯುವ ಸಾಲದ ಶೇ.75% ರಷ್ಟು ಗರಿಷ್ಟ ರೂ.4.00 ಲಕ್ಷಗಳ ಸಹಾಯಧನ ನೀಡುವ ಮೂಲಕ ಸ್ವಯಂ ಉದ್ಯೋಗ ಕೈಗೊಳ್ಳಲು ಪ್ರೋತ್ಸಾಹಿಸುವ ಯೋಜನೆಯನ್ನು ಅನುಷ್ಠಾನಗೊಳಿಸಿ ಆದೇಶಿಸಿದೆ

ಮೇಲೆ ಓದಲಾದ ಕ್ರಮಾಂಕ (2) ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು 2023-24ನೇ ಸಾಲಿನಲ್ಲಿ ಆಯ-ವ್ಯಯ ಕಂಡಿಕೆ:143 ರಂತೆ ಸ್ವಾವಲಂಬಿ ಸಾರಥಿ ಯೋಜನೆಯಡಿ ಪರಿಶಿಷ್ಟ ಜಾತಿಯ ನಿರುದ್ಯೋಗಿ ಯುವ ಜನರು ನಾಲ್ಕು ಚಕ್ರಗಳ ವಾಹನ ಖರೀದಿಗೆ ಪಡೆಯುವ ಸಾಲದ ಶೇಕಡ 75ರಷ್ಟು ಹಾಗೂ ಗರಿಷ್ಟ ರೂ.4.00 ಲಕ್ಷಗಳ ಸಹಾಯಧನವನ್ನು ನಿಗಮದಿಂದ ಮಂಜೂರು ಮಾಡಲು ಆದೇಶ ಹೊರಡಿಸಲಾಗಿರುವುದಾಗಿ ತಿಳಿಸಿರುತ್ತಾರೆ.

ಆದರೆ, ದಿನಾಂಕ:06.09.2024 ರಂದು ನಡೆದ ಜಿಲ್ಲಾ ವ್ಯವಸ್ಥಾಪಕರು ಹಾಗೂ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಮಯದಲ್ಲಿ ಈ ಯೋಜನೆಯಡಿ ಸರ್ಕಾರದ ಆದೇಶದಲ್ಲಿರುವಂತೆ ಬ್ಯಾಂಕುಗಳು ಮಂಜೂರು ಮಾಡುವ ಸಾಲದ ಮೊತ್ತಕ್ಕೆ ಶೇಕಡ 75 ರಷ್ಟು ಅಥವಾ ಗರಿಷ್ಟ ರೂ.4.00 ಲಕ್ಷ ಸಹಾಯಧನ ಮಂಜೂರು ಮಾಡುವಂತೆ ಸರ್ಕಾರದಿಂದ ಆದೇಶವಾಗಿರುತ್ತದೆ. ಇದರಿಂದ ಕಡಿಮೆ ಬೆಲೆಯ ವಾಹನವನ್ನು ಫಲಾನುಭವಿಗಳು ಆಯ್ಕೆ ಮಾಡಿಕೊಂಡಲ್ಲಿ ಅರ್ಹ ಫಲಾನುಭವಿಗಳಿಗೆ ನಿಗಮದಿಂದ ಗರಿಷ್ಟ ರೂ.4.00 ಲಕ್ಷಗಳ ಸಹಾಯಧನ ಮಂಜೂರು ಮಾಡಲು ಸಾಧ್ಯವಾಗುತ್ತಿಲ್ಲ. ಹಾಗೂ ಈ ಹಿಂದಿನ ಸರ್ಕಾರಿ ಆದೇಶಗಳಲ್ಲಿರುವಂತೆ ವಾಹನದ ಘಟಕ ವೆಚ್ಚದ ಶೇಕಡ 75 ರಷ್ಟು ಅಥವಾ ಗರಿಷ್ಟ ರೂ.4.00 ಲಕ್ಷ ಸಹಾಯಧನ ಮಂಜೂರು ಮಾಡುವ ಬಗ್ಗೆ, ಸದರಿ ಸರ್ಕಾರಿ ಆದೇಶವನ್ನು ತಿದ್ದುಪಡಿ ಮಾಡಿದಲ್ಲಿ ಅರ್ಹ ಪರಿಶಿಷ್ಟ ಜಾತಿಯ ವಿದ್ಯಾವಂತ ನಿರುದ್ಯೋಗಿ ಯುವಕ/ಯುವತಿಯರಿಗೆ ಗರಿಷ್ಟ ಮಟ್ಟದ ಸಹಾಯಧನ ಸೌಲಭ್ಯ ಪಡೆಯಲು ಅನುಕೂಲವಾಗುವುದೆಂದು ಹಾಗೂ ಸದರಿ ಯೋಜನೆಯನ್ನು ತ್ವರಿತವಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗುವುದಾಗಿ ತಿಳಿಸಿರುತ್ತಾರೆ.

10/02/2025

ಆದ್ದರಿಂದ, ಇರುವರೆವಿಗೂ ಹಣ ಬಿಡುಗಡೆ ಸ್ವೀಕೃತವಾಗಿರುವ ಪ್ರಸ್ತಾವನೆಗಳನ್ನು ಘಟಕ ವೆಚ್ಚದ ಶೇ.75 ರಷ್ಟು ಅಥವಾ ಗರಿಷ್ಟ ರೂ.4.00 ಲಕ್ಷಗಳ ಸಹಾಯಧನ ಬಿಡುಗಡೆ ಮಾಡಲು ಹಾಗೂ ಈ ಮೇಲೆ ವಿವರಿಸುವಂತೆ ಸರ್ಕಾರಿ ಆದೇಶವನ್ನು ತಿದ್ದುಪಡಿ ಮಾಡಿ ಸೂಕ್ತ ಆದೇಶ ಹೊರಡಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ದಿನಾಂಕ:13.09.2024 ರಂದು ನಡೆದ 238ನೇ ನಿರ್ದೇಶರ ಮಂಡಳಿ ಸಭೆಯಲ್ಲಿ ಮಾರ್ಪಾಡು ಆದೇಶ ಹೊರಡಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ತೀರ್ಮಾನವಾಗಿರುವುದಾಗಿ ತಿಳಿಸಿದ್ದಾರೆ.

ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ಹಿಸುತ್ತಿರುವ ಎಲ್ಲಾ ನಿಗಮಗಳಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶದಲ್ಲಿ ವಾಣಿಜ್ಯ ಬ್ಯಾಂಕ್ ಗಳಿಂದ ಪಡೆಯುವ "ಸಾಲಕ್ಕೆ ಗರಿಷ್ಟ ಶೇಕಡ 75 ರಷ್ಟು ಅಥವಾ ಗರಿಷ್ಟ ರೂ.4.00 ಲಕ್ಷ ರೂ.ಗಳು ಮೀರದಂತೆ ಸಾಲ ಸಹಾಯಧನವನ್ನು ಎಂಬುದನ್ನು ತಿದ್ದುಪಡಿ ಮಾಡಿ ಅದನ್ನು ಘಟಕ ವೆಚ್ಚ ಶೇಕಡ 75 ರಷ್ಟು ಅಥವಾ ಗರಿಷ್ಟ ರೂ.4.00 ಲಕ್ಷಗಳ ಸಹಾಯಧನ ಎಂದು ಮಾರ್ಪಾಡು ಆದೇಶ ಹೊರಡಿಸುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: ಸಕಇ.ಎಸ್.ಡಿ.ಸಿ.254. 2024</u>, (ಭಾಗ-1)**
**<u>ದಿನಾಂಕ:10.02.2025.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ನಿಗಮಗಳಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಸಕಇ 254 ಎಸ್.ಡಿ.ಸಿ 2023, ದಿನಾಂಕ:14.09.2023ರ ಆದೇಶದಲ್ಲಿ ವಾಣಿಜ್ಯ ಬ್ಯಾಂಕ್‌ಗಳಿಂದ ಪಡೆಯುವ "ಸಾಲಕ್ಕೆ ಗರಿಷ್ಟ ಶೇಕಡ 75 ರಷ್ಟು ಅಥವಾ ಗರಿಷ್ಟ ರೂ.4.00 ಲಕ್ಷ ರೂ.ಗಳು ಮೀರದಂತೆ ಸಾಲ ಸಹಾಯಧನವನ್ನು" ಎಂಬುದನ್ನು "ಘಟಕ ವೆಚ್ಚದ ಶೇಕಡ 75 ರಷ್ಟು ಅಥವಾ ಗರಿಷ್ಟ ರೂ.4.00 ಲಕ್ಷಗಳ ಸಹಾಯಧನವನ್ನು" ಎಂದು ತಿದ್ದುಪಡಿ ಮಾಡಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 630 ವೆಚ್ಚ 3/2023, ದಿನಾಂಕ:29.01.2025 ನೀಡಿರುವ ಸಹಮತಿಯ ಮೇರೆಗೆ ಹೋರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S.V
**(ಕಲಾವತಿ ಎಸ್.ವಿ)** 10/02/2025
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

**<u>ಇವರಿಗೆ:-</u>**

1. ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು.

5. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆ ಅಲೆಮಾರಿ ಅಭಿವೃದ್ಧಿ ನಿಗಮ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಬೆಂಗಳೂರು.
10. ಶಾಖಾ ರಕ್ಷಾ ಕಡತ.

**<u>ಪ್ರತಿ ಮಾಹಿತಿಗಾಗಿ:-</u>**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
2. ಸರ್ಕಾರದ ಉಪ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.